# ಕರ್ನಾಟಕವಿಧಾನಸಭೆ

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | 474 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 10/03/2025 |
| ಉತ್ತರಿಸಬೇಕಾದ ಸಚಿವರು : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಲವು ಖಾಸಗಿ ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಅಕ್ರಮದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಲಿರುವ ನೀತಿ ನಿಯಮಗಳೇನು? | ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಂದ ಹೆಚ್ಚಿನ ದರ ಪಡೆಯುವುದು, ವೈದ್ಯಕೀಯ ನಿರ್ಲಕ್ಷತನ ಪ್ರಕರಣಗಳು, ಕನಿಷ್ಠ ಗುಣ ಮಟ್ಟವನ್ನು ನಿರ್ವಹಣೆ ಮಾಡದೇ ಇರುವುದು ಮತ್ತು ಚಿಕಿತ್ಸಾದಾಖಲೆಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡದೇ ಇರುವಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆ.<br><br>ಇಂತಹ ಅಕ್ರಮಗಳನ್ನು ತಡೆಗಟ್ಟಲು ಕರ್ನಾಟಕ ಖಾಸಗಿ ವೈದ್ಯಕೀಯ ಸ್ಥಾಪನೆ ಕಾಯ್ದೆ 2007 & ಸದರಿ ಅಧಿನಿಯಮ 2009 ಸಾರ್ವಜನಿಕ ರಹಿತ ದೃಷ್ಟಿಯಿಂದ ಉತ್ತಮ ಗುಣಮಟ್ಟದ ಆರೋಗ್ಯ ಪಾಲನೆಗೆ ಉತ್ತೇಜನ ನೀಡುವುದು ಮತ್ತು ವೈದ್ಯ ಧರ್ಮದ ತತ್ವಗಳಿಗನುಸಾರವಾಗಿ ಖಾಸಗಿ ವೈದ್ಯಕೀಯ ಸಂಸ್ಥೆಗಳು ಒದಗಿಸಬೇಕಾದ ಸೇವೆಯ ಗುಣಮಟ್ಟಗಳನ್ನು ನಿಗದಿಪಡಿಸುವ ಮೂಲಕ ರಾಜ್ಯದಲ್ಲಿ ಖಾಸಗಿ ವೈದ್ಯಕೀಯ ಸಂಸ್ಥೆಗಳ ವ್ಯವಹಾರಗಳನ್ನು ನಿಯಂತ್ರಿಸಿ ಮೇಲ್ವಿಚಾರಣೆಮಾಡುವುದು ಈ ಅಧಿನಿಯಮದ ಮುಖ್ಯ ಉದ್ದೇಶವಾಗಿದೆ.<br>**ಮುಖ್ಯವಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಅಕ್ರಮಗಳು ನಡೆಯದಂತೆ ತಡೆಯಲು ಕೆ.ಪಿ.ಎಂ.ಇ.ಕಾಯ್ದೆಯಡಿ ಈ ಕೆಳಕಂಡ ನಿಯಮಗಳನ್ನು ಜಾರಿ ಗೊಳಿಸಲಾಗಿದೆ:**<br><br>➢ ತಾಲ್ಲೂಕು ಆರೋಗ್ಯ ಅಧಿಕಾರಿಗಳು ಹಾಗೂ ಕೆ.ಪಿ.ಎಂ.ಇ. ಪ್ರಾಧಿಕೃತ ಅಧಿಕಾರಿಗಳು ತಮ್ಮ ಕಾರ್ಯ ವ್ಯಾಪ್ತಿಗೆ ಒಳಪಡುವ ಖಾಸಗಿ ವೈದ್ಯಕೀಯ ಸಂಸ್ಥೆಗಳಿಗೆ ಪ್ರವೇಶ, ಪರಿಶೀಲನೆಮಾಡಿ ಹಾಗೂ ನಿಯಮ ಉಲ್ಲಂಘಿಸಿದವರ ಖಾಸಗಿ ವೈದ್ಯಕೀಯ ಸಂಸ್ಥೆಗಳ/ವೈದ್ಯರ ವಿರುದ್ಧ ಕೆ.ಪಿ.ಎಂ.ಇ ಕಾಯ್ದೆಯಡಿ ಕ್ರಮ ಕೈಗೊಂಡು, ಜಿಲ್ಲಾ ಸಮಿತಿಯಾದ ಕೆ.ಪಿ.ಎಂ.ಇ.ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ವರದಿಯನ್ನು ಸಲ್ಲಿಸುತ್ತಾರೆ.<br>➢ ಸದರಿ ವರದಿಯನ್ನು ಆದರಿಸಿ, ಜಿಲ್ಲಾ ಸಮಿತಿಯು ನಿಯಮ ಉಲ್ಲಂಘಿಸಿದ ನಕಲಿ ವೈದ್ಯರ / ಕ್ಲಿನಿಕ್‌ಗಳ ವಿಚಾರಣೆ ನಡೆಸಿ, ಸದರಿಯವರು ತಪ್ಪಿತಸ್ಥರೆಂದು ಸಾಬೀತಾದಲ್ಲಿ ಅಂತವರ ವಿರುದ್ಧ ಜಿಲ್ಲಾ ಪ್ರಾಧಿಕಾರವು ಕೆ.ಪಿ.ಎಂ.ಇ.ತಿದ್ದುಪಡಿ ಅಧಿನಿಯಮ 2017 ರಸೆಕ್ಷನ್ 19(1) ಹಾಗೂ ಕೆ.ಪಿ.ಎಂ.ಇ.ಅಧಿನಿಯಮ ಸೆಕ್ಷನ್ 22 ರಂತೆ ಕ್ರಮ ಕೈಗೊಳ್ಳುತ್ತದೆ. |

| | | |
|---|---|---|
| | | ➢ ರೋಗಿಯು ಖಾಸಗಿ ಆಸ್ಪತ್ರೆಯಲ್ಲಿ ಆರೋಗ್ಯ ತಪಾಸಣೆಯನ್ನು ಪಡೆಯುತ್ತಿದ್ದಲ್ಲಿ, ವಿವಿಧ ವೈದ್ಯಕೀಯ ಚಿಕಿತ್ಸೆಗಳಿಗೆ ಸಂದಾಯ ವಾಗತಕ್ಕ ದರ ಪಟ್ಟಿಯನ್ನು ಖಾಸಗಿ ವೈದ್ಯಕೀಯ ಸಂಸ್ಥೆಯ ಸ್ವಾಗತ ಕಾರರ ಆವರಣದಲ್ಲಿ ಪ್ರಕಟಿಸಬೇಕಾಗಿರುತ್ತದೆ. ದರಪಟ್ಟಿಯಲ್ಲಿ ನಿಗದಿ ಪಡಿಸಿದ ಹಣವನ್ನು ಮಾತ್ರ ರೋಗಿಯು ಪಾವತಿಸಬೇಕಾಗಿರುತ್ತದೆ.<br><br>➢ ರೋಗಿಗೆ ಹೆಚ್ಚಿನ ದರ ವಿಧಿಸಿದ್ದಲ್ಲಿ, ಸದರಿ ಆಸ್ಪತ್ರೆಯ ಮೇಲೆ ಉಲ್ಲಂಘನೆ ಸಾಬೀತಾದರೇ, ಕೆಪಿಎಂಇ ಕಾಯ್ದೆ ಪ್ರಕಾರ ದಂಡ ವಿಧಿಸಿದ ಹೆಚ್ಚಿನ ಶುಲ್ಕದ ಮೊತ್ತಕ್ಕೆ ಸಮನಾದ ಹಣವನ್ನು ರೋಗಿಗೆ ಪಾವತಿಸಲಾಗುವುದು.<br><br>➢ ಒಂದು ಖಾಯಿಲೆಗೆ ಹಲವಾರು ಚಿಕಿತ್ಸಾ ವಿಧಾನಗಳಿದ್ದು, ರೋಗಿಯು ತನಗೆ ಹೊಂದುವ ಚಿಕಿತ್ಸಾ ವಿಧಾನವನ್ನು ಆಯ್ಕೆ ಮಾಡುವ ಸ್ವಾತಂತ್ರ್ಯ ಹಾಗೂ ವೈದ್ಯಕೀಯ ಸ್ಥಿತಿಗತಿಯ ಬಗ್ಗೆ ಮತ್ತೊಬ್ಬ ವೈದ್ಯರ ಅಭಿಪ್ರಾಯ ಪಡೆಯ ಬಹುದಾಗಿದೆ.<br><br>➢ ರೋಗಿಯ ಕುಂದು ಕೊರತೆಗಳ ಬಗ್ಗೆ ನಿವಾರಣೆಗಾಗಿ ಸದಸ್ಯ ಕಾರ್ಯದರ್ಶಿಗಳು ನೋಂದಣಿ ಮತ್ತು ಕುಂದು ಕೊರತೆ ನಿವಾರಣಾ ಪ್ರಾಧಿಕಾರ / ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಮನವಿ ನೀಡುವುದು.<br><br>➢ ಒಂದು ವೇಳೆ ರೋಗಿಯು ಮೃತ ಪಟ್ಟಿದ್ದಲ್ಲಿ, ಆಸ್ಪತ್ರೆಯವರು ಹಣವನ್ನು ಪಡೆಯಲು ಒತ್ತಾಯ ಮಾಡದೇ ಅವರ ಮೃತ ದೇಹವನ್ನು ತಕ್ಷಣ ಕುಟುಂಬ ಸದಸ್ಯರಿಗೆ ನೀಡಬೇಕಾಗಿರುತ್ತದೆ. |
| ಆ) | ಹಲವು ಖಾಸಗಿ ಆಸ್ಪತ್ರೆಗಳು ಹೆಚ್ಚಿನ ಹಣ ಪಡೆಯುತ್ತಿದ್ದು ಮಧ್ಯಮ ವರ್ಗ ಹಾಗೂ ಬಡ ಜನರಿಗೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವುದು ದುಸ್ತರವಾಗಿರುವುದು ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಖಾಸಗಿ ವೈದ್ಯಕೀಯ ಸಂಸ್ಥೆಗಳು ರೋಗಿಗಳಿಗೆ ಹೆಚ್ಚಿನ ದರ ವಿಧಿಸಿದ್ದಲ್ಲಿ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ (ತಿದ್ದುಪಡಿ) ಅಧಿನಿಯಮ 2017 ಸೆಕ್ಷನ್ 15 ಉಪಬಂಧ 2 ರಂತೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಜನರಿಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಕ್ತ ಮತ್ತು ಸರಿಯಾದ ರೀತಿಯಲ್ಲಿ ಶುಚಿತ್ವದಲ್ಲಿ ಚಿಕಿತ್ಸೆ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ. ಹಾಗಿದ್ದಲ್ಲಿ, ಯಾಕೆ ಎಷ್ಟೋ ಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವ ಕಾಪಾಡಿಕೊಳ್ಳಲು ಸಾಧ್ಯವಾಗುತ್ತಿಲ್ಲ ಮತ್ತು ಉನ್ನತ ಮಟ್ಟದ ಚಿಕಿತ್ಸೆಗಳು ದೊರೆಯದೇ ಖಾಸಗಿ ಆಸ್ಪತ್ರೆಗೆ ದೌಡಾಯಿಸುತ್ತಿದ್ದಾರೆ ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಆಸ್ಪತ್ರೆಗಳಲ್ಲಿ ಉತ್ಪತ್ತಿಯಾಗುವ ಜೈವಿಕ ವೈದ್ಯಕೀಯ ತ್ಯಾಜ್ಯಗಳ ವಿಲೇವಾರಿಯನ್ನು BMWM rule 2016 ರಂತೆ ಜೈವಿಕ ತ್ಯಾಜ್ಯಗಳ ವಿಲೇವಾರಿಯನ್ನು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಡಿಯಲ್ಲಿ ನೋಂದಾಯಿತ ವಾಗಿರುವ ಸಾಮಾನ್ಯ ಸಂಸ್ಕರಣಾ ಘಟಕಗಳ ಮೂಲಕ ನಿಯಮಾನುಸಾರ ವಿಲೇವಾರಿಯನ್ನು ನಡೆಸಲಾಗುತ್ತಿರುತ್ತದೆ.<br>ಎಲ್ಲಾ ಆಸ್ಪತ್ರೆಗಳು (ಸರ್ಕಾರಿ ಹಾಗೂ ಖಾಸಗಿ) ಘನ ತ್ಯಾಜ್ಯ ವಿಲೇವಾರಿ ಮಾಡುವ ಬಗ್ಗೆ ಕಡ್ಡಾಯವಾಗಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಡಿಯಲ್ಲಿ ನೋಂದಾವಣೆಯಾಗಿರುತ್ತವೆ. ಎಲ್ಲಾಸರ್ಕಾರಿ ಆಸ್ಪತ್ರೆಗಳಲ್ಲಿ ಶುಚಿತ್ವ ಕಾಪಾಡಲು ಕಾಯಕಲ್ಪ ಕಾರ್ಯಕ್ರಮವನ್ನು ಅನುಷ್ಠಾನಮಾಡಲಾಗಿದ್ದು ಆಸ್ಪತ್ರೆಯ ಸ್ವಚ್ಚತೆಗೆ ಆದ್ಯತೆ ನೀಡಲಾಗಿರುತ್ತದೆ. ಉನ್ನತ ಮಟ್ಟದ ಚಿಕಿತ್ಸೆಗಳು ಸದರಿ ಆಸ್ಪತ್ರೆಯಲ್ಲಿ ದೊರೆಯದೇ ಇದ್ದಲ್ಲಿ ಹೆಚ್ಚಿನ ಚಿಕಿತ್ಸೆಗಾಗಿ ಸದರಿ ಸೇವಾ ಸೌಲಭ್ಯವು ಲಭ್ಯ ವಿರುವ ಬಗ್ಗೆ ಖಾತರಿ ಪಡಿಸಿಕೊಂಡು Ab ARK ಮೂಲಕ ಮೇಲ್ದರ್ಜೆ ಆಸ್ಪತ್ರೆಗೆ ರೆಫರ್ ಮಾಡಿ ಉತ್ತಮ ಚಿಕಿತ್ಸೆ ಲಭ್ಯವಾಗುವ ರೀತಿ ಕ್ರಮ ವಹಿಸಲಾಗುತ್ತಿರುತ್ತದೆ. |

| | | |
|---|---|---|
| ಈ) | ಶಿವಮೊಗ್ಗ ಮೆಗ್ಗಾನ್ ಆಸ್ಪತ್ರೆಯಲ್ಲಿ ರಾತ್ರಿ ಸಮಯದಲ್ಲಿ ವೈದ್ಯರು, ನರ್ಸ್‌ಗಳ ಸಹಾಯ ದೊರಕದೇ ರೋಗಿಗಳು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗೂ ಹಲವು ದುರಾಡಳಿತರು ಸೇರಿ, ರೋಗಿಗಳಿಗೆ ಮೊದಲಿನಂತೆ ಸೌಕರ್ಯ ಸಿಗದೇ, ರೋಗಿಗಳು ಕಾಯ್ದು ಚಿಕಿತ್ಸೆ ತೆಗೆದುಕೊಳ್ಳಲು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮೆಗ್ಗಾನ್ಬೋಧನಾ ಜಿಲ್ಲಾಆಸ್ಪತ್ರೆಯಲ್ಲಿ ರಾತ್ರಿ ಸಮಯದಲ್ಲಿ ವೈದ್ಯರು, ನರ್ಸ್ಗಳ ಸಹಾಯ ದೊರಕದೇ ರೋಗಿಗಳು ಪರದಾಡಿರುವ ಯಾವುದೇ ಪ್ರಕರಣಗಳು ದಾಖಲಾಗಿರುವುದಿಲ್ಲ. |
| ಉ) | ಹಾಗಿದ್ದಲ್ಲಿ, ಈ ಸಂಬಂಧ ಕೈಗೊಳ್ಳಲಿರುವ ಕ್ರಮಗಳೇನು? | |

ಆಕುಕ 11 ಎಸ್ ಟಿ ಕ್ಯೂ 2025

ದಿನೇಶ್ ಗುಂಡೂರಾವ್
ಆರೋಗ್ಯಮತ್ತುಕುಟುಂಬಕಲ್ಯಾಣಸಚಿವರು